**All India Radio: Bangalore**
**Regional Bulletin In Kannada**
**30.08.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**30.08.2025 / 6.40 p.m.**
**<><><>**

ಮುಖ್ಯಾಂಶಗಳು :

1. ಭಾರತದ ಸಂಸದೀಯ ವ್ಯವಸ್ಥೆಯು ಜಗತ್ತಿನಲ್ಲೇ ಹೆಚ್ಚು ಪ್ರಜಾಪ್ರಭುತ್ವ ಗುಣ ಹೊಂದಿದೆ - ಕೇಂದ್ರ ಸಚಿವ ಕಿರಣ್ ರಿಜಿಜು
2. ಪೊಲೀಸ್ ಇಲಾಖೆಯ ಮುಂಜಾಗ್ರತಾ ಕ್ರಮದಿಂದ ಅಪರಾಧಗಳಿಗೆ ಕಡಿವಾಣ ಸಾಧ್ಯ - ಮುಖ್ಯಮಂತ್ರಿ ಸಿದ್ದರಾಮಯ್ಯ
3. ಶ್ರೀಕ್ಷೇತ್ರ ಧರ್ಮಸ್ಥಳ ವಿರುದ್ಧ ಅಪಪ್ರಚಾರ ಖಂಡಿಸಿ ಜೆಡಿಎಸ್ ವತಿಯಿಂದ ನಾಳೆ 'ಧರ್ಮಸ್ಥಳ ಸತ್ಯಯಾತ್ರೆ'
4. ನಾಳೆ ೧೨೫ನೇ ಆವೃತ್ತಿಯ ಮನ್ ಕಿ ಬಾತ್; ಭಾರತೀಯ ಸಮುದಾಯ ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಮನದ ಮಾತು

**<><><>**

ಸಂಸತ್ತಿನಲ್ಲಿ ಚರ್ಚೆಯ ಗುಣಮಟ್ಟ ಹಿಂದಿನ ದಿನಗಳಿಗೆ ಹೋಲಿಸಿದರೆ ಈಗ ಕಡಿಮೆಯಾಗಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಬೇಸರ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನ ವಕೀಲರ ಸಂಘ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಿದ್ದರು.'ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಸಂಸದೀಯ ವ್ಯವಸ್ಥೆ' ಎಂಬ ವಿಷಯದ ಕುರಿತು ಮಾತನಾಡಿದ ಅವರು, ಭಾರತೀಯ ಸಂಸದೀಯ ವ್ಯವಸ್ಥೆಯು ವಿಶ್ವದಲ್ಲೇ ವಿಶಿಷ್ಟವಾಗಿದೆ. ಇತರೆ ದೇಶಗಳಿಗೆ ಹೋಲಿಸಿದರೆ ನಮ್ಮ ಸಂಸದೀಯ ವ್ಯವಸ್ಥೆಯು ಹೆಚ್ಚು ಪ್ರಜಾಪ್ರಭುತ್ವ ಗುಣ ಹೊಂದಿದೆ ಎಂದು ಹೇಳಿದರು.

**ಧ್ವನಿ : ಕಿರಣ್ ರಿಜಿಜು ( ೪೦ ಸೆಕೆಂಡ್‌ಗಳು)**

ಒಂದು ದೊಡ್ಡ ದೇಶವಾಗಿ ಭಾರತವು ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿದೆ. ದೇಶದ ನಾಗರಿಕರು ಸಂಸತ್ ಸದಸ್ಯರನ್ನು ತಮ್ಮ ಸಮಸ್ಯೆಗಳೊಂದಿಗೆ ಭೇಟಿಯಾಗುತ್ತಾರೆ. ಆದ್ದರಿಂದ ಸಂಸತ್ತಿನ ಸದಸ್ಯರು ಜನರ ಪ್ರತಿನಿಧಿಗಳಾಗಿ ಸಂಸತ್ತಿನಲ್ಲಿ ಜನರ ಸಮಸ್ಯೆಗಳಿಗೆ ಧ್ವನಿಯಾಗಿ ಅದಕ್ಕೆ ಪರಿಹಾರವನ್ನು ಕಂಡುಹಿಡಿಯುವ ಜವಾಬ್ದಾರಿ ಹೊಂದಿದ್ದಾರೆ ಎಂದು ಸಚಿವ ಕಿರಣ್ ರಿಜಿಜು ಹೇಳಿದರು. ಇತ್ತೀಚಿನ ಮಳೆಗಾಲದ ಅಧಿವೇಶನದಲ್ಲಿ, ವಿರೋಧ ಪಕ್ಷಗಳು ಗದ್ದಲ ಎಬ್ಬಿಸಿ, ಕಲಾಪಕ್ಕೆ ಅಡ್ಡಿಯುಂಟು ಮಾಡಿದರೂ ಕೆಲವು ಉತ್ಪಾದಕ ಚರ್ಚೆ ನಡೆಯಿತು. ಆನ್‌ಲೈನ್ ಜೂಜಿನ ನಿಷೇಧ ಮಸೂದೆ ಸೇರಿದಂತೆ ಹಲವಾರು ಮಸೂದೆಗಳು ಚರ್ಚೆಯಿಲ್ಲದೆ ಅಂಗೀಕರಿಸಲ್ಪಟ್ಟವು ಎಂದರು. ಪ್ರತಿಯೊಂದು ಮಸೂದೆಯನ್ನು ವಿಸ್ತೃತ ಚರ್ಚೆಯೊಂದಿಗೆ ಅಂಗೀಕರಿಸಬೇಕು. ಆದರೆ ವಿರೋಧ ಪಕ್ಷಗಳು ಯಾವುದೇ ಚರ್ಚೆಯಿಲ್ಲದೆ, ಮಸೂದೆಗಳನ್ನು ಅಂಗೀಕರಿಸುವ ಸನ್ನಿವೇಶವನ್ನು ಸೃಷ್ಟಿಸಿತು ಎಂದು ಕೇಂದ್ರ ಸಚಿವ ಕಿರಣ್ ರಿಜಿಜು ಆರೋಪಿಸಿದರು.

<><><><>

ಸಮಾಜದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಜೊತೆಗೆ ಜನರ ಆಸ್ತಿಪಾಸ್ತಿ ಸಂರಕ್ಷಿಸುವುದು ಪೊಲೀಸರ ಜವಾಬ್ದಾರಿ. ದೇಶದಲ್ಲಿ ಶಾಂತಿ, ನೆಮ್ಮದಿ ನೆಲೆಸುವಲ್ಲಿ ಪೊಲೀಸರ ಪಾತ್ರ ಅತ್ಯಂತ ಮಹತ್ವವಾದುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ರಾಜಭವನದಲ್ಲಿ ಇಂದು ನಡೆದ ರಾಜ್ಯ ಗೃಹ ಇಲಾಖೆಯಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದ ಅಧಿಕಾರಿಗಳಿಗೆ ರಾಷ್ಟ್ರಪತಿ ಪದಕ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸಮಾಜದಲ್ಲಿ ನಡೆಯುವ ಅಪರಾಧಗಳನ್ನು ತಡೆಗಟ್ಟುವ ಜವಾಬ್ದಾರಿ ಸರ್ಕಾರ ಹಾಗೂ ಪೊಲೀಸ್ ಇಲಾಖೆಯದ್ದಾಗಿದೆ. ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡರೆ ಬಹಳಷ್ಟು ಅಪರಾಧಗಳನ್ನು ತಡೆಗಟ್ಟಲು ಸಾಧ್ಯವಾಗುತ್ತದೆ ಎಂದರು. ಸರ್ಕಾರ ಪ್ರತಿ ಜಿಲ್ಲೆಯಲ್ಲಿ ಡಿಸಿಆರ್‌ಇ ಪೊಲೀಸ್ ಠಾಣೆಯನ್ನು ಸ್ಥಾಪಿಸಿದೆ. ಇತ್ತೀಚೆಗೆ ನಡೆದ ಪರಿಶೀಲನಾ ಸಭೆಯಲ್ಲಿ ಡಿಸಿಆರ್‌ಇ ಪೊಲೀಸ್ ಠಾಣೆಗಳ ಕಾರ್ಯ ಮತ್ತು ಪ್ರಗತಿ ತೃಪ್ತಿದಾಯಕವಿಲ್ಲ ಎಂಬುದಕ್ಕೆ ಗಮನಕ್ಕೆ ಬಂದಿದೆ. ಇದನ್ನು ಪೊಲೀಸ್ ಇಲಾಖೆ ಗಂಭೀರವಾಗಿ ಪರಿಗಣಿಸಿ, ದುರ್ಬಲ ವರ್ಗದವರಿಗೆ ಸುರಕ್ಷತೆ ಒದಗಿಸುವ ಸರ್ಕಾರದ ಉದ್ದೇಶ ಸಫಲವಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹಿಸಿದರು.

<><><><>

ಧರ್ಮಸ್ಥಳ ಪ್ರಕರಣದಲ್ಲಿ SIT ಸಮರ್ಥವಾಗಿ ತನಿಖೆ ನಡೆಸಿದರೆ ಸ್ವಾಗತ ಕೋರುತ್ತಿದ್ದೆವು. ರಾಜ್ಯದ ಜನರಿಗೆ SIT ತನಿಖೆ ಮೇಲೆ ವಿಶ್ವಾಸವಿಲ್ಲ. NIA ತನಿಖೆಗೆ ವಹಿಸಿದರೆ ಷಡ್ಯಂತ್ರ ಬಯಲಾಗಲಿದೆ. ಷಡ್ಯಂತ್ರಕ್ಕೆ ವಿದೇಶಿ ಫಂಡಿಂಗ್ ಶಂಕೆಯಿದೆ ಎಂದು JDS ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆರೋಪಿಸಿದ್ದಾರೆ. ಮಂಡ್ಯದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಧರ್ಮಸ್ಥಳ ಶ್ರೀ ಕ್ಷೇತ್ರದ ವಿರುದ್ಧ ಷಡ್ಯಂತ್ರ ರೂಪಿಸಲು ವಿದೇಶಿ ಫಂಡಿಂಗ್ ನಡೆದಿರುವ ಬಗ್ಗೆ ಅನುಮಾನ ಇದೆ. ಇದರ ಬಗ್ಗೆ ಸತ್ಯಾಸತ್ಯತೆ ಹೊರತರಲು NIA ತನಿಖೆ ಅವಶ್ಯಕ. ಧರ್ಮಸ್ಥಳ ಪಾವಿತ್ರ್ಯತೆಯನ್ನ ಹಾಳು ಮಾಡಲು ಒಳಸಂಚು ರೂಪಿಸಲಾಗಿದೆ ಎಂದು ದೂರಿದರು. ಧರ್ಮಸ್ಥಳ ವಿರುದ್ಧ ನಡೆದ ಅಪಪ್ರಚಾರ ವಿರೋಧಿಸಿ ನಾಳೆ ಜೆಡಿಎಸ್ ವತಿಯಿಂದ ಧರ್ಮಸ್ಥಳ ಸತ್ಯಯಾತ್ರೆ ಕೈಗೊಳ್ಳಲಾಗಿದೆ ಎಂದು ನಿಖಿಲ್ ಕುಮಾರಸ್ವಾಮಿ ತಿಳಿಸಿದರು.

<><><><>

ಧರ್ಮಸ್ಥಳದ ವಿರುದ್ಧ ನಡೆಯುತ್ತಿರುವ ಅಪಪ್ರಚಾರ, ಷಡ್ಯಂತ್ರ, ಸುಳ್ಳು ಆರೋಪಗಳ ವಿರುದ್ಧ ಜೆಡಿಎಸ್ ಪಕ್ಷ ಧರ್ಮಸ್ಥಳ ಸತ್ಯಯಾತ್ರೆಗೆ ಕರೆ ನೀಡಿರುವ ಹಿನ್ನಲೆಯಲ್ಲಿ ಜೆಡಿಎಸ್ ಚಿಕ್ಕಬಳ್ಳಾಪುರ ಜಿಲ್ಲಾ ಘಟಕದ ವತಿಯಿಂದ ನಾಳೆ ಬೆಳಗ್ಗೆ ಧರ್ಮಸ್ಥಳ ಸತ್ಯಯಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ. ಧರ್ಮಸ್ಥಳಕ್ಕೆ ಹೊರಡುವ ಈ ಯಾತ್ರೆಯಲ್ಲಿ ನೂರಾರು ಜೆಡಿಎಸ್ ಕಾರ್ಯಕರ್ತರು ಭಾಗಿಯಾಗಲಿದ್ದಾರೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಮುಕ್ತ ಮುನಿಯಪ್ಪ ತಿಳಿಸಿದ್ದಾರೆ.

<><><><>

೨೦೨೫-೨೬ರ ಹಣಕಾಸು ವರ್ಷದ ಏಪ್ರಿಲ್‌ನಿಂದ ಜೂನ್ ತ್ರೈಮಾಸಿಕದಲ್ಲಿ ಭಾರತದ ನೈಜ ಜಿಡಿಪಿ ಶೇಕಡ ೭.೮ರಷ್ಟು ಬೆಳವಣಿಗೆ ದಾಖಲಿಸಿದೆ. ಕಳೆದ ಹಣಕಾಸು ವರ್ಷದ ೪ನೇ ತ್ರೈಮಾಸಿಕದಲ್ಲಿ ಜಿಡಿಪಿ ಶೇಕಡ ೭.೪

ರಷ್ಟಿತ್ತು. ಆದರೆ ಹಿಂದಿನ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಅದು ಶೇಕಡ ೬.೫ ರಷ್ಟಿತ್ತು. ಅಂಕಿ-ಅಂಶಗಳು ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯ ನಿನ್ನೆ ಬಿಡುಗಡೆ ಮಾಡಿದ ಅಂದಾಜಿನ ಪ್ರಕಾರ, ಇದೇ ಅವಧಿಯಲ್ಲಿ ನಾಮಾಂಕಿತ ಜಿಡಿಪಿ ಶೇಕಡ ೮.೮ರಷ್ಟು ಬೆಳವಣಿಗೆ ದರ ಕಂಡಿದೆ. ಕಳೆದ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ದಾಖಲಾದ ಶೇಕಡ ೧.೫ರ ಬೆಳವಣಿಗೆ ದರಕ್ಕೆ ಹೋಲಿಸಿದರೆ, ಕೃಷಿ ಮತ್ತು ಸಂಬಂಧಿತ ವಲಯಗಳು ಶೇಕಡ ೩.೭ರ ನೈಜ ಒಟ್ಟು ಮೌಲ್ಯವರ್ಧಿತ ಬೆಳವಣಿಗೆ ದರ ಕಂಡಿದೆ. ಜಿಡಿಪಿ ಬೆಳವಣಿಗೆ ಬಗ್ಗೆ ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಹರ್‌ದೀಪ್ ಸಿಂಗ್ ಪುರಿ, ೨೦೧೪ರಲ್ಲಿ ಎರಡು ಟ್ರಿಲಿಯನ್ ಡಾಲರ್ ಆರ್ಥಿಕತೆಯಾಗಿದ್ದ ಭಾರತ, ಜಾಗತಿಕವಾಗಿ ೧೧ನೇ ಸ್ಥಾನದಲ್ಲಿತ್ತು. ವಿವಿಧ ಉಪಕ್ರಮಗಳ ಬೆನ್ನಲ್ಲೇ ಭಾರತ ೫ನೇ ಸ್ಥಾನಕ್ಕೇರಿ ಪ್ರಸ್ತುತ ನಾಲ್ಕನೇ ಅತಿದೊಡ್ಡ ಆರ್ಥಿಕತೆಯಾಗಿದೆ ಹಾಗೂ ಶೀಘ್ರದಲ್ಲೇ ಮೂರನೇ ಅತಿದೊಡ್ಡ ಆರ್ಥಿಕತೆ ಹೊಂದಿದ ರಾಷ್ಟ್ರವಾಗುವತ್ತ ಮುನ್ನಡೆದಿದೆ ಎಂದಿದ್ದಾರೆ. ಜಿಡಿಪಿ ಬೆಳವಣಿಗೆ ಕುರಿತು ಆಕಾಶವಾಣಿಯೊಂದಿಗೆ ಇನ್ಸ್‌ಸ್ಟಿಟ್ಯೂಟ್ ಆಫ್ ಚಾರ್ಟೆಡ್ ಆಕೌಂಟ್ಸ್‌ನ ಮಾಜಿ ಅಧ್ಯಕ್ಷ ರವೀಂದ್ರ ಕೋರೆ ಪ್ರತಿಕ್ರಿಯಿಸಿದ್ದಾರೆ.

**ಧ್ವನಿ : ರವೀಂದ್ರ ಕೋರೆ, ( 40 ಸೆಕೆಂಡುಗಳು)**

**<><><><>**

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ, ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೫ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಈ ಕಾರ್ಯಕ್ರಮವನ್ನು ಕೇಳಬಹುದಾಗಿದೆ.

**<><><><>**

ರಾಜ್ಯದ ರೈಲ್ವೆ ಅಭಿವೃದ್ಧಿ ಕೆಲಸಗಳಿಗೆ ಕೇಂದ್ರ ಸರ್ಕಾರ ಎರಡು ಲಕ್ಷ ಕೋಟಿ ರೂಪಾಯಿಗೂ ಅಧಿಕ ಹಣ ನೀಡಿದೆ. ಈ ಪೈಕಿ ರಾಜ್ಯದಲ್ಲಿ ೪೯ ಸಾವಿರ ಕೋಟಿ ರೂಪಾಯಿ ಕೆಲಸ ನಡೆದಿದ್ದು, ತುಮಕೂರು ಜಿಲ್ಲೆ ಒಂದರಲ್ಲೇ ೧೪ ಸಾವಿರ ಕೋಟಿ ರೂಪಾಯಿ ಕೆಲಸ ನಡೆದಿದೆ ಎಂದು ಕೇಂದ್ರದ ರೈಲ್ವೆ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ತಮಕೂರು ಜಿಲ್ಲೆಯ ಗುಬ್ಬಿ ಪಟ್ಟಣದ ರೈಲ್ವೆ ನಿಲ್ದಾಣ ಬಳಿ ಮೇಲ್ಸೇತುವೆ ಮತ್ತು ಹೆದ್ದಾರಿ ರಸ್ತೆ ವೈಟ್‌ಟ್ಯಾಪಿಂಗ್ ಕಾಮಗಾರಿಗೆ ಗುದ್ದಲಿಪೂಜೆ ಹಾಗೂ ರಾಷ್ಟ್ರೀಯ ಹೆದ್ದಾರಿ ಸರ್ವೀಸ್ ರಸ್ತೆ ಲೋಕಾರ್ಪಣೆ ನೆರವೇರಿಸಿ ಅವರು ಮಾತನಾಡಿದರು. ಬೆಂಗಳೂರು-ತುಮಕೂರು ಬೈಪಾಸ್ ಹೆದ್ದಾರಿ ಎರಡು ಹಂತದಲ್ಲಿ ಕೆಲಸ ನಡೆದಿದೆ. ಇನ್ನೂ ಬಾಕಿ ಇರುವ ೪೦ ಕಿಲೋ ಮೀಟರ್ ಕಾಮಗಾರಿಗೆ ೨ ಸಾವಿರದ ೬೫೦ ಕೋಟಿ ರೂಪಾಯಿ ಮಂಜೂರು ಮಾಡಲಾಗಿದೆ. ಉಳಿದ ಎರಡು ಕಾಮಗಾರಿಗೆ ಡಿಪಿಆರ್ ಸಿದ್ಧಪಡಿಸಲಾಗುತ್ತಿದೆ ಎಂದು ಸಚಿವ ವಿ.ಸೋಮಣ್ಣ ಮಾಹಿತಿ ನೀಡಿದರು.

**<><><><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ಅಣ್ಣೇಶ್ವರ ಗ್ರಾಮಪಂಚಾಯಿತಿಯ ನೂತನ ಗ್ರಾಮ ಸೌಧ ಕಟ್ಟಡವನ್ನು ಇಂದು ಆಹಾರ ನಾಗರಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಎಚ್.ಮುನಿಯಪ್ಪ ಲೋಕಾರ್ಪಣೆಗೊಳಿಸಿದರು. ಈ ವೇಳೆ ಮಾತನಾಡಿದ ಅವರು, ಗ್ಯಾರಂಟಿ ಯೋಜನೆ ಜಾರಿಗೆ ತಂದ ನಂತರ ತಲಾದಾಯದಲ್ಲಿ ರಾಜ್ಯ ಪ್ರಥಮ ಸ್ಥಾನದಲ್ಲಿದೆ ಎಂದು ಹೇಳಿದರು.

**<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>**